All India Radio: Bangalore
Regional Bulletin In Kannada
05.07.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><><><>

ಮುಖ್ಯಾಂಶಗಳು

- ಮೇಕೆದಾಟು ಯೋಜನೆ ತಮಿಳುನಾಡಿನೊಂದಿಗೆ ಮಾತುಕತೆ ಮೂಲಕ ಅನುಷ್ಠಾನಗೊಳಿಸಲು ಸಾಧ್ಯ - ಕೇಂದ್ರ ಸಚಿವ ಕುಮಾರಸ್ವಾಮಿ
- ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಬೆಂಗಳೂರು ಭೇಟಿ ; ಇಂದು ಕೈಗಾರಿಕೋದ್ಯಮಿಗಳೊಂದಿಗೆ ಸಂವಾದ
- ತುಂಗಾ, ಭದ್ರಾ ಜಲಾಶಯಗಳಿಂದ ಯಾವುದೇ ಕ್ಷಣದಲ್ಲಿ ನೀರು ಬಿಡುಗಡೆ ಸಾಧ್ಯತೆ ; ನದಿ ಪಾತ್ರದ ಜನರು ಎಚ್ಚರಿಕೆಯಿಂದ ಇರುವಂತೆ ಜಿಲ್ಲಾಡಳಿತ ಸೂಚನೆ
- ಕಂಠೀರವ ಕ್ರೀಡಾಂಗಣದಲ್ಲಿಂದು ಎನ್‌ಸಿ ಕ್ಲಾಸಿಕ್ ಜಾವೆಲಿನ್ ಥ್ರೊ ಸ್ಪರ್ಧೆ ; ನೀರಜ್ ಚೋಪ್ರಾ ಪ್ರಧಾನ ಆಕರ್ಷಣೆ

<><><><>

ತಮಿಳುನಾಡಿನೊಂದಿಗೆ ಸೌಹಾರ್ದಯುತವಾಗಿ ಮಾತುಕತೆ ಮುಖಾಂತರ ಮೇಕೆದಾಟು ಯೋಜನೆ ಅನುಷ್ಠಾನಗೊಳಿಸಲು ಸಾಧ್ಯ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಹುಕ್ಕು ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ಮೈಸೂರಿನ ಜಿಲ್ಲಾ ಪಂಚಾಯತ್‌ನಲ್ಲಿ ಹಮ್ಮಿಕೊಂಡಿದ್ದ ದಿಶಾ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ವಿಳಂಬಕ್ಕೆ ರಾಜ್ಯ ಸರ್ಕಾರದ ಧೋರಣೆಯೇ ಕಾರಣ ಎಂದು ದೂರಿದ್ದಾರೆ. ರಾಜ್ಯ ಸರ್ಕಾರ ಸರಿಯಾದ ದಾಖಲೆಗಳನ್ನು ಸಲ್ಲಿಸದೆ ವಿಳಂಬ ನೀತಿ ತೋರುತ್ತಿದೆ ಎಂದು ಆರೋಪಿಸಿದ್ದಾರೆ. ಈ ಯೋಜನೆ ಬಗ್ಗೆ ಸರಿಯಾದ ನೀಲ ನಕ್ಷೆ ತಯಾರಿಸಿದ್ದರೆ ಇವತ್ತಿಗೆ ಕಾಮಗಾರಿ ಪೂರ್ಣಗೊಳ್ಳುತ್ತಿತ್ತು. ಯೋಜನೆ ಅನುಷ್ಠಾನಕ್ಕೆ ಕೇಂದ್ರ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡಲು ಸಿದ್ಧವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇದೇ ವೇಳೆ ಅರಬ್ ದೇಶಗಳ ಪ್ರವಾಸದಿಂದ ದೇಶದ ಸ್ಟೀಲ್ ಉದ್ಯಮಕ್ಕೆ ಮತ್ತಷ್ಟು ಉತ್ತೇಜನ ದೊರೆತಿದೆ ಎಂದು ತಿಳಿಸಿದ್ದಾರೆ. ಭದ್ರಾವತಿ ಕಾರ್ಖಾನೆ ಸೇರಿದಂತೆ ರಾಜ್ಯದ ಇತರ ಕಾರ್ಖಾನೆಗಳ ಪುನಶ್ಚೇತನಕ್ಕೆ ಸರ್ಕಾರ ಸಿದ್ಧವಿದೆ ಎಂದು ಹೇಳಿದ್ದಾರೆ.

<><><><>

೨೦೪೭ ರಲ್ಲಿ ಭಾರತದ ಆರ್ಥಿಕತೆಯನ್ನು ಅಗ್ರಸ್ಥಾನವಾಗಿಸುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಐಐಟಿ ಮದ್ರಾಸ್ ಹಳೆ ವಿದ್ಯಾರ್ಥಿಗಳು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ೨೦೪೭ ರಲ್ಲಿ ೩೨ ಟ್ರಿಲಿಯನ್ ಡಾಲರ್ ಆರ್ಥಿಕತೆ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಸಬ್ ಕಾ ಸಾತ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್, ಸಬ್ ಕಾ ಪ್ರಯಾಸ್ ಮೂಲಕ ದೇಶದ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಧ್ವನಿ : ಪಿಯೂಷ್ ಗೋಯಲ್

ಇಂದು ಅವರು, ಕೈಗಾರಿಕೋದ್ಯಮಿಗಳೊಂದಿಗೆ ಸಂವಾದ ನಡೆಸಲಿದ್ದು, ಬಳಿಕ ಸಂಜೆ ದೇವನಹಳ್ಳಿಯಲ್ಲಿ ಏರೋಸ್ಪೇಸ್ ವಿಶೇಷ ಆರ್ಥಿಕ ವಲಯಕ್ಕೆ ಭೇಟಿ ನೀಡಿ, ಅಲ್ಲಿನ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ಕುಣಿಗಲ್ ಮಾತ್ರವಲ್ಲ ತುಮಕೂರಿನ ಎಲ್ಲಾ ತಾಲೂಕಿಗೂ ನೀರು ಒದಗಿಸಲು ಯೋಜನೆ ರೂಪಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಹೇಮಾವತಿ ಲಿಂಕ್ ಕೆನಾಲ್ ವಿಚಾರವಾಗಿ ಜನಪ್ರತಿನಿಧಿಗಳ ಸಭೆ ಕರೆದು, ಅಭಿಪ್ರಾಯ ಸಂಗ್ರಹಿಸಲಾಗಿದೆ. ಕೇಂದ್ರ ಸಚಿವ ಸೋಮಣ್ಣ ಭಾರತೀಯ ವಿಜ್ಞಾನ ಸಂಸ್ಥೆ ತಜ್ಞರಿಂದ ಪರಿಶೀಲನೆಗೆ ಶಿಫಾರಸ್ಸು ಮಾಡಿದ್ದು, ಇದಕ್ಕೆ ಒಪ್ಪಿಗೆ ನೀಡಲಾಗಿದೆ ಎಂದು ಹೇಳಿದ್ದಾರೆ. ಯಾರಿಗೂ ಅನ್ಯಾಯವಾಗದ ರೀತಿಯಲ್ಲಿ ನೀರು ಹಂಚಲು ನಿರ್ಧರಿಸಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ಹಿತಕಾಯಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

<><><><>

ಹಾವೇರಿ ಜಿಲ್ಲೆ ರಾಣೆಬೆನ್ನೂರು ತಾಲ್ಲೂಕಿನ ಚೌಡಯ್ಯದಾನಪುರದಲ್ಲಿರುವ ಅಂಬಿಗರ ಚೌಡಯ್ಯನವರ ಐಕ್ಯ ಮಂಟಪ ಅಭಿವೃದ್ಧಿಗೆ ಕೇಂದ್ರ ಪ್ರಾಚ್ಯ ಪುರಾತತ್ವ ಇಲಾಖೆಯ ಕೆಲ ನಿಯಮಗಳಿಂದ ತೊಡಕಾಗಿದ್ದು, ಎಲ್ಲಾ ತೊಡಕುಗಳನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್ ತಿಳಿಸಿದ್ದಾರೆ. ಅಂಬಿಗರ ಚೌಡಯ್ಯನವರ ಐಕ್ಯ ಮಂಟಪ ಅಭಿವೃದ್ಧಿಗಾಗಿ ೨೦೨೫-೨೬ನೇ ಸಾಲಿನ ಕ್ರಿಯಾಯೋಜನೆ ಸಿದ್ಧಪಡಿಸಲಾಗಿದೆ. ತೊಡಕು ಸರಿಯಾದರೆ, ಅಭಿವೃದ್ಧಿ ಕೆಲಸ ಶುರುವಾಗಲಿದೆ ಎಂದು ಹೇಳಿದ್ದಾರೆ. ರಾಣೆಬೆನ್ನೂರಿನ ದೊಡ್ಡ ಕೆರೆಯನ್ನು ಅಭಿವೃದ್ಧಿಪಡಿಸಲು ಸಣ್ಣ ನೀರಾವರಿ ಇಲಾಖೆಯಿಂದ ೧೦ ಕೋಟಿ ರೂಪಾಯಿ ಯೋಜನೆ ಕೈಗೆತ್ತಿಕೊಳ್ಳಲಾಗುತ್ತಿದೆ. ಕೆರೆಯೂ ಪ್ರವಾಸಿ ತಾಣವಾಗಲಿದ್ದು, ದೋಣಿ, ಪಕ್ಷಿಧಾಮ ಮತ್ತು ವಿಜ್ಞಾನ ಉದ್ಯಾನ ಆಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಬಿಜೆಪಿ ಸರ್ಕಾರದ ಅವಧಿಯಲ್ಲಿ ಯಾವ್ಯಾವ ಇಲಾಖೆಯಲ್ಲಿ ಎಷ್ಟು ಖರ್ಚು ಮಾಡಲಾಗಿದೆಯೋ ಅದಕ್ಕಿಂತ ಹೆಚ್ಚು ಹಣ ಕಾಂಗ್ರೆಸ್ ಸರ್ಕಾರದಲ್ಲಿ ನೀಡಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸ್ವಲ್ಪ ಭಿನ್ನಾಭಿಪ್ರಾಯ ಇರುವುದು ಸಾಮಾನ್ಯ ಎಂದು ಹೇಳಿದ್ದಾರೆ. ಇದೇ ವೇಳೆ ಬಿಜೆಪಿ ನಾಯಕ ರವಿಕುಮಾರ್ ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಬಗ್ಗೆ ನೀಡಿರುವ ಹೇಳಿಕೆ ಕುರಿತಂತೆ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><>

ತುಂಗ-ಭದ್ರಾ ಎರಡೂ ಜಲಾಶಯಗಳಿಂದ ನದಿಗೆ ಯಾವುದೇ ಕ್ಷಣದಲ್ಲಾದರೂ ೮೦ ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಬಿಡುಗಡೆಯಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆಯ ನದಿ ಪಾತ್ರದ ಜನರು ಎಚ್ಚರಿಕೆ ವಹಿಸುವಂತೆ ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊನ್ನಾಳಿ, ಹರಿಹರ, ದಾವಣಗೆರೆ ತಾಲ್ಲೂಕಿನ ನದಿ ಪಾತ್ರದ ಜನರು ಎಚ್ಚರಿಕೆ ವಹಿಸವೇಕೆಂದು ಸೂಚಿಸಿದ್ದಾರೆ.

ಧ್ವನಿ : ಡಾ. ಗಂಗಾಧರ ಸ್ವಾಮಿ

<><><>

ಕಂಠೀರವ ಕ್ರೀಡಾಂಗಣದಲ್ಲಿಂದು ಎನ್‌ಸಿ ಕ್ಲಾಸಿಕ್ ಜಾವೆಲಿನ್ ಥ್ರೋ ಸ್ಪರ್ಧೆ ನಡೆಯಲಿದೆ. ಎರಡು ಬಾರಿ ಒಲಿಂಪಿಕ್ ಚಾಂಪಿಯನ್ ನೀರಜ್ ಚೋಪ್ರಾ ಇಂದಿನ ಸ್ಪರ್ಧೆಯ ಪ್ರಧಾನ ಆಕರ್ಷಣೆಯಾಗಲಿದ್ದಾರೆ. ಜರ್ಮನಿಯ ೨೦೧೬ರ ಒಲಿಂಪಿಕ್ ಚಾಂಪಿಯನ್ ಥಾಮಸ್ ರೊಹ್ಲರ್, ಕೀನ್ಯಾದ ೨೦೧೫ರ ವಿಶ್ವ ಚಾಂಪಿಯನ್ ಜ್ಯೂಲಿಯಸ್ ಯೆಗೊ ಮತ್ತು ಅಮೆರಿಕದ ಕರ್ಟಿಸ್ ಥಾಂಪ್ಸನ್, ನೀರಜ್‌ಗೆ ಪ್ರಬಲ ಸವಾಲೊಡ್ಡುವ ಸಾಧ್ಯತೆಯಿದೆ. ಇಂದಿನ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾ ೨ನೇ ಬಾರಿಗೆ ೯೦ ಮೀಟರ್ ದಾಟುವ ಗುರಿ ಹೊಂದಿದ್ದಾರೆ.

<><><>

ಬಾಲ್ಯ ವಿವಾಹ ನಿಷೇಧ ಕಾಯ್ದೆ-೨೦೦೬ರಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ೧೦ ಬಾಲ್ಯ ವಿವಾಹ ಪ್ರಕರಣಗಳು ದಾಖಲಾಗಿದ್ದು, ೮ ಪ್ರಕರಣ ತಡೆಯಲಾಗಿದೆ. ೨ ಬಾಲ್ಯ ವಿವಾಹ ನಡೆದಿದ್ದು, ಎರಡು ಎಫ್‌ಐಆರ್ ದಾಖಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ. ಬಾಲ್ಯ ವಿವಾಹ ಪ್ರಕರಣಗಳನ್ನು ಶೂನ್ಯಕ್ಕೆ ತರುವಲ್ಲಿ ಸೂಕ್ತ ಕ್ರಮ ವಹಿಸುವಂತೆ  ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಾರ್ವಜನಿಕರು, ಅಧಿಕಾರಿಗಳ ಸಮನ್ವಯತೆ ಹಾಗೂ ಸಹಕಾರದಿಂದ ಬಾಲ್ಯ ವಿವಾಹ ಪ್ರಕರಣಗಳನ್ನು ಶೇಕಡ ನೂರರಷ್ಟು ತಡೆಯಬಹುದು. ಈ ಬಗ್ಗೆ  ಶಾಲಾ ಕಾಲೇಜು, ಕೈಗಾರಿಕೆ, ಕಾರ್ಖಾನೆಗಳಲ್ಲಿ ಆಗಾಗ ಪರಿಶೀಲನೆ ನಡೆಸಿ ಬಾಲ್ಯ ವಿವಾಹದ ಬಗ್ಗೆ ಜಾಗೃತಿ ಮೂಡಿಸುವಂತೆ ಸಲಹೆ ನೀಡಿದ್ದಾರೆ.

<><><>

ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಗದಗ ಜಿಲ್ಲೆಯ ನಿಡಗುಂದಿ ಗ್ರಾಮ ಪಂಚಾಯತಿಗಳಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳನ್ನು  ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಪರಿಶೀಲಿಸಿದರು. ಸಂಜೀವಿನಿ ವರ್ಕ್ ಶೆಡ್ ಮತ್ತು ಸಿಸಿ ರಸ್ತೆ ನಿರ್ಮಾಣ ಹಾಗೂ ಸರ್ಕಾರಿ ಕಾಲೇಜಿನಲ್ಲಿ ನಿರ್ಮಿಸಿದ ಪಿಂಕ್ ಶೌಚಾಲಯ, ಕುಡಿಯುವ ನೀರಿನ ಸೌಲಭ್ಯಗಳನ್ನು ಪರಿಶೀಲಿಸಿದರು. ನಂತರ ಅವರು ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಶೈಕ್ಷಣಿಕ ಚಟುವಟಿಕೆಗಳ ಬಗ್ಗೆ ಸಂವಾದ ನಡೆಸಿದರು.

<><><>

ಇಂದಿನ ಡಿಜಿಟಲ್ ಯುಗದಲ್ಲಿ ಭಾರತೀಯ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಭಂಡಾರವನ್ನು ಯುವ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಗಣಕಯಂತ್ರ ತಂತ್ರಜ್ಞಾನ ಪರಿಣಾಮಕಾರಿ ಸಾಧನವಾಗಿದೆ ಎಂದು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿ ಪ್ರೊ. ಕೆ.ಆರ್. ಜಲಜಾ ಪ್ರತಿಪಾದಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>